# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 321 |
| ಸದಸ್ಯರ ಹೆಸರು | ಡಾ|| ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 11-12-2024 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಲಿಂಗಸೂರು ತಾಲ್ಲೂಕಿನ ಹಟ್ಟಿ ಚಿನ್ನದ ಗಣಿ ಪ್ರದೇಶ ಕೇಂದ್ರ ಸ್ಥಾನವಿಲ್ಲದೆ ಹಟ್ಟಿ ಪಟ್ಟಣ ನಿಲ್ಲೊಗಲ್ ಗೆಜ್ಜಲಗಟ್ಟಾ, ಅನ್ವರಿ ನಗನೂರು ಸೇರಿದಂತೆ ಸಾರ್ವಜನಿಕರು ರೈತರು ವಿದ್ಯಾರ್ಥಿಗಳು ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಹಟ್ಟಿ ಪಟ್ಟಣ, ನಿಲೋಗಲ್, ಗೆಜ್ಜಲಗಟ್ಟಾ, ಆನ್ವರಿ, ನಗನೂರು ಗ್ರಾಮಗಳು ಪ್ರಸ್ತುತ ಗುರುಗುಂಟಾ ಹೋಬಳಿ ವ್ಯಾಪ್ತಿಗೊಳಪಟ್ಟು, ಸದರಿ ಕೇಂದ್ರದಿಂದ 22 ಕಿ.ಮೀ. ದೂರದಲ್ಲಿರುತ್ತವೆ. ಗುರುಗುಂಟಾ ನಾಡಕಚೇರಿ ಜೊತೆಗೆ ಗ್ರಾಮ ಪಂಚಾಯತಿ ಕಾರ್ಯಾಲಯಗಳಲ್ಲಿರುವ ನಾಗರಿಕ ಸೇವಾ ಕೇಂದ್ರಗಳು (ಸಿ.ಎಸ್.ಸಿ) ಮತ್ತು ಗ್ರಾಮ ಮಟ್ಟದಲ್ಲಿ ಗ್ರಾಮ ಒನ್ ಕೇಂದ್ರಗಳ ಮೂಲಕವೂ ಸಹ ನಾಗರಿಕರು ವಿವಿಧ ಪ್ರಮಾಣ ಪತ್ರಗಳನ್ನು ಪಡೆಯಲು ಅವಕಾಶವಿರುತ್ತದೆ.<br><br>ಹಟ್ಟಿ ಪಟ್ಟಣವು ಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಗೆ ಒಳಪಡುತ್ತದೆ. ನಿಲೋಗಲ್ ಮತ್ತು ಗೆಜ್ಜಲಗಟ್ಟಾ ಗ್ರಾಮಗಳು ಗೆಜ್ಜಲಗಟ್ಟಾ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುತ್ತದೆ. ಆನ್ವರಿ ಮತ್ತು ನಗನೂರು ಗ್ರಾಮಗಳು ಆನ್ವರಿ ಪಂಚಾಯತಿ ವ್ಯಾಪ್ತಿಗೆ ಒಳಪಡುತ್ತದೆ.<br><br>ಸದರಿ ಪಂಚಾಯತಿಗಳ ವ್ಯಾಪ್ತಿಯಲ್ಲಿ ನಾಗರಿಕ ಸೇವಾ ಕೇಂದ್ರಗಳು (ಸಿ.ಎಸ್.ಸಿ) ಹಾಗೂ ಗ್ರಾಮಗಳಲ್ಲಿ ಗ್ರಾಮ ಒನ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವುದರಿಂದ ಸಾರ್ವಜನಿಕರು ರೈತರು ವಿದ್ಯಾರ್ಥಿಗಳು ತೊಂದರೆಗಳನ್ನು ಅನುಭವಿಸುತ್ತಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಹಟ್ಟಿ ಪಟ್ಟಣಕ್ಕೆ ಹೋಬಳಿ ಕೇಂದ್ರ ಮಂಜೂರು ಮಾಡಲು; ಸರ್ಕಾರವು ತೆಗೆದುಕೊಳ್ಳುವ ಕ್ರಮವೇನು? | ಹಟ್ಟಿ ಪಟ್ಟಣವನ್ನು ಕಂದಾಯ ಹೋಬಳಿ ಎಂದು ಘೋಷಣೆ ಮಾಡುವಂತೆ ಕೋರಿಕೆಗಳು ಸ್ವೀಕೃತವಾಗಿರುತ್ತವೆ. ಈ ಕೋರಿಕೆಗಳು ಪರಿಗಣಿಸಲು ಸೂಕ್ತವಾಗಿದ್ದಲ್ಲಿ, ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಕೋರಿ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಇವರಿಗೆ ಪತ್ರ ಬರೆಯಲಾಗಿದೆ. ಸದರಿಯವರಿಂದ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ.<br><br>ಹೊಸದಾಗಿ ಹೋಬಳಿಗಳನ್ನು ರಚಿಸುವ ವಿಷಯವು ಸರ್ಕಾರದ ಸಾಮಾನ್ಯ ನೀತಿಗೆ ಸಂಬಂಧಿಸಿದ್ದಾಗಿದೆ. ನೂತನ ಹೋಬಳಿಗಳನ್ನು ರಚಿಸಬೇಕಾದರೆ ಭೌಗೋಳಿಕ ಮತ್ತು ಆಡಳಿತಾತ್ಮಕ ಅಗತ್ಯತೆಗಳ ಜೊತೆಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಹ ಅವಲಂಬಿಸಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ ಹೊಸದಾಗಿ ಹೋಬಳಿಗಳನ್ನು ರಚಿಸಲು ಸರ್ಕಾರವು ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ. |

ಸಂಖ್ಯೆ: ಕಂಇ 81 ಎಲ್‌ಆರ್‌ಡಿ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು